ಕಛೇರಿ : +91 80 2287 4039
+91 80 2235 4085
ಫ್ಯಾಕ್ಸ್ : +9180 2228 5591
ಇ-ಮೇಲ್ : com-hfws@karnataka.gov.in

# ಆಯುಕ್ತಾಲಯ

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

**ಸಂಖ್ಯೆ:**ಸಿಜಿಎ(2)/ಇತರೆ/01/2019-20

ದಿನಾಂಕ:16.10.2020.

**ಸುತ್ತೋಲೆ**

**ವಿಷಯ:** ಅನುಕಂಪದ ಆಧಾರದ ಮೇಲೆ ನೇಮಕಾತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಗಳಲ್ಲಿ ಬಾಕಿ ಉಳಿದಿರುವ ಪ್ರಕರಣಗಳನ್ನು ಇತ್ಯರ್ಥ ಪಡಿಸುವ ಬಗ್ಗೆ.

**ಉಲ್ಲೇಖ:** ನಿರ್ದೇಶನಾಲಯದ ಸಮ ಸಂಖ್ಯೆ ಸುತ್ತೋಲೆ ದಿ:17.06.2020.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವಾಗಲೇ ಮರಣ ಹೊಂದಿದ ನೌಕರರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿಗಾಗಿ ಬಾಕಿ ಉಳಿದಿರುವ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಉಲ್ಲೇಖಿತ ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

ಅರ್ಜಿದಾರರು, ಸಂಬಂಧಿಸಿದ ಸಂಸ್ಥೆಯ ಮುಖ್ಯಸ್ಥರು ಮತ್ತು ನಿಯಂತ್ರಣಾಧಿಕಾರಿಗಳು ಪರಿಪೂರ್ಣ ದಾಖಲೆಗಳನ್ನು ಸಲ್ಲಸದೇ ಇರುವುದರಿಂದ ನಿರ್ದೇಶನಾಲಯದ ಹಂತದಲ್ಲಿ ಹಲವಾರು ಪ್ರಕರಣಗಳು ಬಾಕಿ ಉಳಿದಿರುತ್ತವೆ. ಆದುದರಿಂದ ಬಾಕಿ ಉಳಿದಿರುವ ಪ್ರಕರಣಗಳ ಪಟ್ಟಿಯನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿ, (ಅನುಬಂಧ) ಒಂದು ವರ್ಷಕ್ಕಿಂತ ಅಧಿಕ ಬಾಕಿ ಇರುವ ನೇಮಕಾತಿ ಪ್ರಕರಣಗಳನ್ನು ಆದ್ಯತೆ ಮೇರೆಗೆ ಇತ್ಯರ್ಥಪಡಿಸಲು ತ್ವರಿತವಾಗಿ ಅವಶ್ಯಕ ಕ್ರಮಗಳನ್ನು ಕೈಗೊಂಡು ಹಾಗೂ ಕೈಗೊಂಡ ಕ್ರಮದ ಬಗ್ಗೆ ಕಾಲಕಾಲಕ್ಕೆ ಮಾಹಿತಿಯನ್ನು ಆಯುಕ್ತಾಲಯಕ್ಕೆ ಸಲ್ಲಿಸಲು ಸೂಚಿಸಿದೆ. (ಪ್ರತಿ ತಿಂಗಳು ಕೊನೆಯ ದಿನಾಂಕಕ್ಕೆ ಮಾಹಿತಿಯನ್ನು ಸಲ್ಲಿಸುವುದು)

ಉಲ್ಲೇಖಿತ ಸುತ್ತೋಲೆಯಲ್ಲಿ ಈಗಾಗಲೇ ತಿಳಿಸಿರುವಂತೆ ಹೊಸ ಪ್ರಸ್ತಾವನೆಗಳನ್ನು ಸಲ್ಲಿಸುವಾಗಲೂ ಸಹ ತಮ್ಮ ಹಂತದಲ್ಲೆ ಪರಿಶೀಲಿಸಿ ಕ್ರಮ ಕೈಗೊಂಡು ಪರಿಪೂರ್ಣ ಪ್ರಸ್ತಾವನೆಗಳನ್ನು ಸಲ್ಲಿಸಲು ಸೂಚಿಸಿದೆ.

ಒಂದು ವೇಳೆ ತಾವು ನೇಮಕಾತಿ ಪ್ರಕರಣದ ಕುರಿತು ಯಾವುದೇ ಕ್ರಮಗಳನ್ನು ಕೈಗೊಳ್ಳದಿದ್ದಲ್ಲಿ ಅಂತಹ ಪ್ರಕರಣಗಳಿಗೆ ಸಂಬಂಧಿಸಿದಂತೆ ನಿಮ್ಮನ್ನೆ ನೇರ ಹೊಣೆಗಾರರನ್ನಾಗಿ ಮಾಡಿ ನಿಮ್ಮ ಜವಾಬ್ದಾರಿ ಮೇರೆಗೆ ನಿರ್ದೇಶನಾಯದ ಹಂತದಲ್ಲಿ ಕಡತಗಳನ್ನು ಮುಕ್ತಾಯಗೊಳಿಸಲಾಗುವುದು ಹಾಗೂ ಈ ರೀತಿ ಮುಕ್ತಾಯಗೊಳಿಸಿದ ಪ್ರಕರಣಗಳ ಪ್ರಸ್ತಾವನೆಯನ್ನು ಪುನ: ನಿರ್ದೇಶನಾಲಯಕ್ಕೆ ಸಲ್ಲಿಸಿದ್ದಲ್ಲಿ, ಸಂಬಂಧಿಸಿದ ವಿಷಯ ನಿರ್ವಾಹಕರು, ಕಛೇರಿ ಅಧೀಕ್ಷಕರು, ಆಡಳಿತಾಧಿಕಾರಿಗಳು/ಸಹಾಯಕ ಆಡಳಿತಾಧಿಕಾರಿಗಳು ಹಾಗೂ ಸಂಬಂಧಿಸಿದ ನಿಯಂತ್ರಣಾಧಿಕಾರಿಗಳ ವಿರುದ್ಧ ಸಕ್ಷಮ ಪ್ರಾಧಿಕಾರದಿಂದ ನಿಯಮಾನುಸಾರ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಸೂಚಿಸಿದೆ.

16.10

**ಆಯುಕ್ತರು,**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು,**

**ಮಾಹಿತಿಗಾಗಿ:**

ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.

3ನೇ ಮಹಡಿ, ಐಪಿಪಿ ಕಟ್ಟಡ, ಆನಂದ್ ರಾವ್ ವೃತ್ತ, ಬೆಂಗಳೂರು - 560 009.

**ಮಾಹಿತಿಗಾಗಿ:**

ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.

**ಪ್ರತಿಯನ್ನು:**

1. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
2. ನಿರ್ದೇಶಕರು/ಡೀನ್/ವೈದ್ಯಕೀಯ ಅಧೀಕ್ಷಕರು.
3. ಎಲ್ಲಾ ಜಿಲ್ಲಾ ಶಸ್ತ್ರಚಿಕಿತ್ಸಕರು,
4. ಮುಖ್ಯಸ್ಥರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಎಲ್ಲಾ ಸ್ವಾಯತ್ತ ಸಂಸ್ಥೆಗಳು.
5. ಆಡಳಿತ ವೈದ್ಯಾಧಿಕಾರಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಛೇರಿ ಪ್ರಾ.ಆ.ಕೇಂದ್ರ/ಸ.ಆ.ಕೇಂದ್ರ,/ಸಾರ್ವಜನಿಕ ಆಸ್ಪತ್ರೆ (ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಮುಖಾಂತರ ಕಳುಹಿಸಿ ಮಾಹಿತಿ ಪಡೆಯುವುದು)
6. ಸಂಬಂಧಪಟ್ಟ ಅಭ್ಯರ್ಥಿಗಳಿಗೆ (ಸಂಸ್ಥೆಯ ಮುಖ್ಯಸ್ಥರ ಮುಖಾಂತರ ಕಳುಹಿಸಿ ಮಾಹಿತಿ ಪಡೆಯುವುದು)
7. ಕಛೇರಿ ಪ್ರತಿ.